# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ –176(144)ರ ವಾರ್ಡ್ ಸಭೆಯ ನಡವಳಿ

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಹೊಸ ವಾರ್ಡ್ ಸಂಖ್ಯೆ: 176–ಸೋಮೇಶ್ವರನಗರ (ಹಳೆ ವಾರ್ಡ್–144) ರಲ್ಲಿ ವಾರ್ಡ್ ಸಭೆಯನ್ನು ಮಾನ್ಯ ಶ್ರೀ. ಪ್ರದೀಪ್‌ಕುಮಾರ್ ಎನ್., ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಕೆಂಪೇಗೌಡನಗರ ಉಪವಿಭಾಗ ಹಾಗೂ ನೋಡಲ್ ಅಧಿಕಾರಿ ಮತ್ತು ವಾರ್ಡ್ ಸಮಿತಿ ಅಧ್ಯಕ್ಷರ ಅಪ್ಪಣೆ ಮೇರೆಗೆ ದಿನಾಂಕ:05/11/2022 ರಂದು ಶನಿವಾರದಂದು ಬೆಳಗ್ಗೆ 10.30 ರಿಂದ 12.00 ರವರೆಗೆ ವಾರ್ಡ್ ಕಮಿಟಿ ಸಭೆಯನ್ನು ಟಿ. ಮರಿಯಪ್ಪ ರಸ್ತೆಯ ಬಯಲು ರಂಗ ಮಂದಿರದ ಹತ್ತಿರವಿರುವ ವಾರ್ಡ್ ಕಛೇರಿಯಲ್ಲಿ ನಡೆಸಲಾಗಿದ್ದು, ವಾರ್ಡ್ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಅಧಿಕಾರಿಗಳಿಗೆ ಹಾಗೂ ಸಾರ್ವಜನಿಕರಿಗೆ ಆಹ್ವಾನ ನೀಡಿದ್ದು, ಸಭೆಯನ್ನು ನಡೆಸಲಾಯಿತು.

**ಹಾಜರಿದ್ದವರು:–**

1. ಶ್ರೀ. ಪ್ರದೀಪ್‌ಕುಮಾರ್ ಎನ್, ಸ.ಕಾ.ನಿ.ಅ (ಕೆ.ಗೌ.ನ) ಹಾಗೂ ನೋಡಲ್ ಅಧಿಕಾರಿ.
2. ಶ್ರೀ. ಆರ್. ಕೊಟ್ರೇಶ್ ನಾಯಕ್, ಸಹಾಯಕ ಅಭಿಯಂತರರು, ವಾರ್ಡ್–176(144).
3. ಶ್ರೀಮತಿ. ಸುರೇಖ, ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ 176(144)
4. ಹಾಗೂ ಸಾರ್ವಜನಿಕರಾದ ಶ್ರೀ. ಫಜಲ್‌ಖಾನ್, ಶ್ರೀ. ಅಜರ್ ಅಹಮದ್, ಶ್ರೀ. ಜಯಕೃಷ್ಣ, ಶ್ರೀ. ಮೊಹಮ್ಮದ್ ಸಲಾವುದ್ದೀನ್, ಶ್ರೀ. ಭೀಮಪ್ಪ ಎಂ, ಶ್ರೀ. ಅಜ್ಮಲ್ ಖಾನ್, ಶ್ರೀ. ಅಫ್ಜಲ್, ಶ್ರೀ. ಮುನಿರಾಜು ಜಿ. (ಗುಂಡ) ಹಾಗೂ ಶ್ರೀಮತಿ/ಕುಮಾರಿ. ಶಾಲಿನಿ

*********

1. ನೋಡಲ್ ಅಧಿಕಾರಿಯವರು ಮಾತನಾಡಿ ಕಳೆದ ಸಭೆಯಲ್ಲಿ ಚರ್ಚಿಸಿದ ವಿಷಯಗಳ ಬಗ್ಗೆ ಕೈಗೊಂಡ ಕ್ರಮಗಳ ಕುರಿತು ಕಳೆದ ಸಭೆಯ ನಡವಳಿಗಳನ್ನು ಓದುವಂತೆ ವಾರ್ಡ್ ಅಭಿಯಂತರರಿಗೆ ತಿಳಿಸಿದರು. ಅದರಂತೆ ವಾರ್ಡ್ ಅಭಿಯಂತರರು ಕಳೆದ ಸಭೆಯಲ್ಲಿ ಚರ್ಚಿಸಿದ ವಿಷಯಗಳ ಕುರಿತು ಸಭೆಯಲ್ಲಿ ಪ್ರಸ್ತಾಪಿಸಿ ದೂರುಗಳಿಗೆ ಸಂಬಂಧಿಸಿದಂತೆ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ವಿವರಿಸಿದರು. ಅದರಂತೆ ಕಳೆದ ಸಭೆಯ ನಡವಳಿಗಳ ದೂರುಗಳನ್ನು ಪರಿಹರಿಸಲಾಗಿರುತ್ತದೆ.



Scanned with CamScanner

2. ಸಭೆಯಲ್ಲಿ ಹಾಜರಿದ್ದ ವಾರ್ಡಿನ ಬಿ.ಹೆಚ್.ಇ.ಎಲ್ ಲೇಔಟ್‌ನ ಸಂಘದ ಪದಾದಿಕಾರಿಗಳು ಮಾತನಾಡಿ ಚರಂಡಿಯ ಹೂಳನ್ನು ಎತ್ತುವುದು, ಪ್ರತಿ ತಿಂಗಳು ಸಾಮೂಹಿಕ ಸ್ವಚ್ಛತಾ ಕಾರ್ಯವನ್ನು ಹಮ್ಮಿಕೊಳ್ಳುವುದು, ಬೀದಿ ನಾಯಿಗಳ ನಿರ್ವಹಣೆ ಹಾಗೂ ಸದರಿ ಪ್ರದೇಶದಲ್ಲಿರುವ ಪಾರ್ಕ್‌ನ್ನು ನಿರ್ವಹಣೆ ಮಾಡುವುದು ಎಂದು ಸಭೆಯಲ್ಲಿ ಕೋರಿದರು. ಇದರನ್ವಯ ನೋಡಲ್ ಅಧಿಕಾರಿಯವರು ಮಾತನಾಡಿ ಸಂಬಂಧಪಟ್ಟ ಇಲಾಖೆಗಳಿಗೆ ಕ್ರಮ ವಹಿಸಲು ತಿಳಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

3. ವಾರ್ಡಿನ ಸ್ಥಳೀಯರಾದ ಶ್ರೀ. ಭೀಮಪ್ಪ ರವರು ಮಾತನಾಡಿ ಗುಲ್ಬರ್ಗ ಕಾಲೋನಿ ಪ್ರದೇಶದಲ್ಲಿ ಕಸ ಬೀಳದಂತೆ ನಿಗಾ ವಹಿಸಲು ಮಾರ್ಷಲ್‌ಗಳನ್ನು ನೇಮಿಸಲು ಹಾಗೂ ಸದರಿ ಪ್ರದೇಶದಲ್ಲಿ ಹೂಳನ್ನು ಎತ್ತಲು ಕೋರಿದರು. ಇದರನ್ವಯ ನೋಡಲ್ ಅಧಿಕಾರಿಯವರು ಮಾತನಾಡಿ ಸಂಬಂಧಪಟ್ಟ ಇಲಾಖೆಗಳಿಗೆ ಕ್ರಮ ವಹಿಸಲು ತಿಳಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

4. ವಾರ್ಡಿನ ಸ್ಥಳೀಯರಾದ ಶ್ರೀ. ಮುನಿರಾಜು ಜಿ. (ಗುಂಡ) ರವರು ಮಾತನಾಡಿ ಕೆ.ಎಂ. ಕಾಲೊನಿ, ಗುಟ್ಟೇಪಾಳ್ಯ, ವೆಂಕಟರೆಡ್ಡಿನಗರ, ಸೋಮೇಶ್ವರ ಕಾಲೋನಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಾಸವಾಗಿ ಎಲೆಕ್ಟ್ರಾನಿಕ್ ಉಪಕರಣಗಳು ಹಾಳಾಗಿರುತ್ತದೆ. ಆದ್ದರಿಂದ ಸಂಬಂಧಪಟ್ಟ ಇಲಾಖೆಯವರಿಗೆ ವಿದ್ಯುತ್‌ನ ವ್ಯತ್ಯಾಸದಿಂದ ಆಗುತ್ತಿರುವ ತೊಂದರೆಯನ್ನು ಸರಿಪಡಿಸಲು ಕೋರಿದರು. ಇದರನ್ವಯ ನೋಡಲ್ ಅಧಿಕಾರಿಯವರು ಮಾತನಾಡಿ ಸಂಬಂಧಪಟ್ಟ ಇಲಾಖೆಗಳಿಗೆ ಕ್ರಮ ವಹಿಸಲು ತಿಳಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

5. ವಾರ್ಡಿನ ಸ್ಥಳೀಯರಾದ ಶ್ರೀ. ಅಜ್ಮಲ್ ಮತ್ತು ಶ್ರೀ. ಅಫ್ಜಲ್ ರವರು ಮಾತನಾಡಿ ಕೆ.ಎಂ ಕಾಲೋನಿ ಮತ್ತು ದಯಾನಂದ ಕಾಲೋನಿಗಳಲ್ಲಿ ಒಳಚರಂಡಿ ಚೇಂಬರ್‌ಗಳು ತುಂಬಿ ಚರಂಡಿ ನೀರು ರಸ್ತೆಗೆ ಹರಿದು ಸಾರ್ವಜನಿಕರಿಗೆ ಹಾಗೂ ವಾಹನಗಳಿಗೆ ಓಡಾಡಲು ತುಂಬಾ ತೊಂದರೆಯಾಗಿರುವ ಬಗ್ಗೆ, ವಾರ್ಡ್ ಪ್ರದೇಶದಲ್ಲಿ ಕಸವನ್ನು ಸಮರ್ಪಕವಾಗಿ ವಿಲೇವಾರಿ ಮಾಡದೆ ಇರುವ ಬಗ್ಗೆ, ಸೋಮೇಶ್ವರನಗರ ಮುಖ್ಯರಸ್ತೆಯ ಬೀದಿ ದೀಪಗಳು ಕೆಲಸ ನಿರ್ವಹಿಸುತ್ತಿಲ್ಲದ ಬಗ್ಗೆ ಹಾಗೂ ಸೋಮೇಶ್ವರನಗರ ಮುಖ್ಯರಸ್ತೆಯಲ್ಲಿ ನಿಂತಿರುವ ಬಿಡಾಡಿ ವಾಹನಗಳನ್ನು ತೆರವುಗೊಳಿಸಲು ಕೋರಿದರು. ಇದರನ್ವಯ ನೋಡಲ್ ಅಧಿಕಾರಿಯವರು ಮಾತನಾಡಿ ಸಂಬಂಧಪಟ್ಟ ಇಲಾಖೆಗಳಿಗೆ ಕ್ರಮ ವಹಿಸಲು ತಿಳಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು



Scanned with CamScanner

ಮೇಲಿನ ಈ ಎಲ್ಲಾ ಚಟುವಟಿಕೆಗಳನ್ನು ಕ್ರಮಬದ್ಧವಾಗಿ ನಿರ್ವಹಿಸಲು ಎಲ್ಲಾ ಸಿಬ್ಬಂಧಿ ವರ್ಗದವರು ಒಂದುಗೂಡಿ ಈ ಕಾರ್ಯದಲ್ಲಿ ಪಾಲ್ಗೊಂಡು ಮಾನ್ಯ ಆಯುಕ್ತರು (ಬಿಬಿಎಂಪಿ) ರವರು ವಹಿಸಿರುವ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಎಲ್ಲರೂ ಸಹಕರಿಸಬೇಕೆಂದು ಹೇಳುತ್ತಾ ಸಭೆ ಮುಕ್ತಾಯಗೊಳಿಸಿದರು.

5/11/2022

ಕಾರ್ಯದರ್ಶಿ & ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ – 176(144)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

5/11/22

ಅಧ್ಯಕ್ಷರು & ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ – 176(144)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

Scanned with CamScanner